**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

## <u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 315/2021</u>

**<u>ಫಿರ್ಯಾದಿ ಃ</u>** ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

**<u>ಆರೋಪಿ/ತರು</u>ಃ**

ರಾಕೇಶನಾಯ್ಕ ಬಿನ್ ರಾಮಾನಾಯ್ಕ, 26 ವರ್ಷ, ವ್ಯವಸಾಯಗಾರರು, ವಾಸ ಃ ಕರಕುಚ್ಚಿ ತಾಂಡ್ಯ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

****

**<u>-ಃದೋಷಾರೋಪಣೆಃ-</u>**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಸಿ/ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 11.04.2020 ರಂದು ಮಧ್ಯಾಹ್ನ 11.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಿಗೆಯನ್ನು ಪಡೆಯದೇ ಮತ್ತು ಸರ್ಕಾರಕ್ಕೆ ರಾಜಧನವನ್ನು ಪಾವತಿಸದೇ ಕರಕುಚ್ಚಿ ಗ್ರಾಮದ ಮೋಹನಕುಮಾರರವರ ಅಡಿಕೆ ತೋಟದ ಬಳಿ ಭದ್ರಾ ಹೊಳೆಯಿಂದ ಅಕ್ರಮವಾಗಿ ಕಳ್ಳತನದಿಂದ ಮರಳನ್ನು ಮಾರಾಟ ಮಾಡುವ ಉದ್ದೇಶದಿಂದ ರೂ.2,625/- ಬೆಲೆಯ ಮರಳನ್ನು ತೆಗೆದು ಪಿಕಪ್ ವಾಹನ ಸಂಖ್ಯೆ ಕೆಎಃ18/ಎ-8498 ರಲ್ಲಿ ತುಂಬಿಕೊಂಡು ಸಾಗಾಟ ಮಾಡುತ್ತಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 379 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 29.07.2024

**ಸಹಿ**
**(ಶಿವಕುಮಾರ್.ಆರ್)**
**ಸಿ/ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**